ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ನಗರ ಪ್ರದೇಶಗಳಲ್ಲಿ ವಸತಿ ಯೋಜನೆ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

637(735) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಲ್ಲಿ ಸರ್ಕಾರದ ವತಿಯಿಂದ ನಗರ ಪ್ರದೇಶಗಳಲ್ಲಿ ಕೈಗೊಂಡ ವಸತಿ ಯೋಜನೆಗಳ ಪ್ರಮಾಣವೆಷ್ಟು ; ಈ ವಸತಿ ಯೋಜನೆಗಳ ಮೂಲಕ ಎಷ್ಟು ಮನೆಗಳನ್ನು ವಸತಿ ರಹಿತರಿಗಾಗಿ ನಿರ್ಮಿಸಲು ಯೋಜಿಸಲಾಗಿತ್ತು ; (ಯೋಜನೆವಾರು, ನಗರವಾರು ವಿವರ ನೀಡುವುದು)

(ಆ) ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಷ್ಟು ವಸತಿ ಯೋಜನೆಗಳನ್ನು ನಗರ ಪ್ರದೇಶದಲ್ಲಿ ಜಾರಿಗೊಳಿಸಲಾಗುತ್ತಿದೆ ; ಈ ವಸತಿ ಯೋಜನೆಗಳ ಮೂಲಕ ನಿರ್ಮಿಸಲಾಗುತ್ತಿರುವ ಮನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಪೂರ್ಣಗೊಂಡ ವಸತಿ ಯೋಜನೆಗಳ ಸಂಖ್ಯೆ ಎಷ್ಟು ;

(ಇ) ಕಳೆದ 5 ವರ್ಷಗಳಲ್ಲಿ ನಗರ ಪ್ರದೇಶದ ಬಡವರಿಗೆ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ವಿತರಿಸಲಾದ ಮನೆಗಳ ಸಂಖ್ಯೆ ಎಷ್ಟು ? (ನಗರದ ಪ್ರದೇಶವಾರು ವಿವರ ನೀಡುವುದು)